ಆ) ೩ ಶಾಲೆಗಳಿಗೆ ಮಾತ್ರ ಸರ್ಕಾರಿ ಕಟ್ಟಡಗಳಿವೆ.

ಇ) ಹಂತ ಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ರಾಜ್ಯದಲ್ಲಿ ಶಿಕ್ಷಣ ಇಲಾಖಾ ನ್ಯೂನತೆಗಳು.

೯೭೦. ಶ್ರೀ ವಸಂತ ಬಂಗೇರ (ಬೆಳ್ಳಂಗಡಿ) — ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂಬ ಸರ್ಕಾರದ ನಿರ್ಧಾರ ಸ್ವಾಗತಾರ್ಹ. ಆದರೆ ಉಪ ಶಿಕ್ಷಣ ಅಧಿಕಾರಿಯವರ ಕಛೇರಿಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

ಆ) ಅದನ್ನು ನಿವಾರಿಸಲು ಸರ್ಕಾರದವರು ಕ್ರಮ ತೆಗೆದುಕೊಳ್ಳುವರೆ.

ಇ) ಶಿಕ್ಷಣ ಇಲಾಖೆಯಲ್ಲಿ ದುಡಿಯುವ ಉಪ ಶಿಕ್ಷಣಾಧಿಕಾರಿಗಳು, ಶಾಲಾ ನಿರೀಕ್ಷಣಾಧಿಕಾರಿಯವರಿಗೆ ಇಪ್ಪತ್ತು ವರ್ಷಗಳ ಹಿಂದೆ ನಿಗದಿ ಪಡಿಸಿದ ತಿಂಗಳೊಂದರ ಪ್ರಯಾಣ ಭತ್ಯೆ ರೂ. ೧೦೦ ಹಾಗೂ ರೂ. ೫೦ ರಂತೆ ನೀಡುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಈ) ಪ್ರಕೃತ ಪ್ರಯಾಣದರ ಹಿಂದಿನಿಂದ ಎಷ್ಟೋ ಪಟ್ಟು ಹೆಚ್ಚಿರುವುದರಿಂದ ಅವರ ಪ್ರಯಾಣ ಭತ್ಯೆಯನ್ನು ತಿಂಗಳೊಂದಕ್ಕೆ ರೂ. ೫೦೦ ಎಂತಲೂ ರೂ. ೨೫೦ ರಂತೆ ಮಂಜೂರು ಮಾಡಲು ಕ್ರಮ ಕೈಗೊಳ್ಳುವರೆ.

ಉ) ಇತರ ಇಲಾಖೆಗಳಲ್ಲಿ ಅಧಿಕಾರಿಗಳಿಗೆ ವಾಹನಗಳನ್ನು ಒದಗಿಸಿದಂತೆ ಎಲ್ಲಾ ಉಪ ಶಿಕ್ಷಣಾಧಿಕಾರಿಗಳ ಕಛೇರಿಗಳಿಗೆ ವಾಹನವನ್ನು ಒದಗಿಸುವ ವ್ಯವಸ್ಥೆಯನ್ನು ಮಾಡಲಾಗುವುದೆ?

ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಬಂದಿದೆ.

ಈ) ನಿಗದಿತ ಪ್ರಯಾಣ ಭತ್ಯೆಯನ್ನು ಹೆಚ್ಚಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ಈ ವಿಷಯವನ್ನು ಸೂಕ್ತ ಕಾಲದಲ್ಲಿ ಪರಿಶೀಲಿಸಲಾಗುವುದು.

ಫಲಿಮಾರು ಸರಕಾರಿ ಕಿರಿಯ ಕಾಲೇಜಿನಲ್ಲಿ ಶಿಕ್ಷಕರ ಹಾಗೂ ಶಿಕ್ಷಕೇತ್ತರ ಸಿಬ್ಬಂದಿಗಳ ಕೊರತೆ.

೯೫೨. ಶ್ರೀ ವಸಂತ ವಿ. ಸಾಲಿಯಾನ (ಕಾವು).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಫಲಿಮಾರು ಸರ್ಕಾರಿ ಕಿರಿಯ ಕಾಲೇಜಿನಲ್ಲಿ ಅವಶ್ಯಕವಾದ ಶಿಕ್ಷಕರ ಹಾಗೂ ಶಿಕ್ಷಕೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಏನು ಕ್ರಮ ತೆಗೆದುಕೊಂಡಿದ್ದಾರೆ?

ಶ್ರೀ ಎಂ. ರಘುಪತಿ (ಶಿಕ್ಷಣ ಮಂತ್ರಿಗಳು).—

ಅ) ಬಂದಿದೆ.

ಆ) ಸರ್ಕಾರಿ ಕಿರಿಯ ಕಾಲೇಜು ಫಲಿಮಾರು ಇದರಲ್ಲಿ ಖಾಲಿ ಇರುವ ಇತಿಹಾಸ ಉಪನ್ಯಾಸಕರ ಹುದ್ದೆಯನ್ನು ಒಪ್ಪಂದದ ಆಧಾರದ ಮೇಲೆ ತುಂಬಲಾಗಿದ್ದು ಉಪನ್ಯಾಸಕರು ಕೆಲಸ ನಿರ್ವಹಿಸುತ್ತಿದ್ದಾರೆ. ಉಳಿದ ಹುದ್ದೆಗಳನ್ನು ಆದಷ್ಟು ಬೇಗನೇ ತುಂಬಲಾಗುವುದು. ಈಗ ಖಾಲಿಯಿರುವ